ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

3

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಮಂಡಲ ಜಂಟಿ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE 14/1/2021

# ಜ.28ರಿಂದ ಫೆ.5ರ ವರೆಗೆ ವಿಧಾನಮಂಡಲ ಜಂಟಿ ಅಧಿವೇಶನ

**ಬೆಂಗಳೂರು:** ರಾಜ್ಯ ವಿಧಾನಮಂಡಲದ ಉಭಯ ಸದನಗಳ ಜಂಟಿ ಅಧಿವೇಶನ ಜ.28ರಿಂದ ಫೆ.5ರವರೆಗೆ ನಡೆಯಲಿದೆ. ಬುಧವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಸಂಬಂಧ ತೀರ್ಮಾನ ಕೈಗೊಳ್ಳಲಾಗಿದೆ. ಮೊದಲ ದಿನ 28ರಂದು ರಾಜ್ಯಪಾಲ ವಜೂಭಾಯಿ ವಾಲಾ ಅವರು ವಿಧಾನಮಂಡಲದ ಉಭಯ ಸದನಗಳ ಜಂಟಿ ಅಧಿವೇಶನ ಉದ್ದೇಶಿಸಿ ಮಾತನಾಡಲಿದ್ದಾರೆ. ರಜಾದಿನಗಳನ್ನು ಹೊರತು ಪಡಿಸಿ ಏಳು ದಿನಗಳ ಕಾಲ ಅಧಿವೇಶನ ನಡೆಯಲಿದೆ. ರಾಜ್ಯಪಾಲರ ಭಾಷಣ ಮತು ಅವರ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲಿನ ಚರ್ಚೆ ನಡೆಯಲಿದೆ ಎಂದು ತಿಳಿಸಿದರು. ಬರುವ ಮಾರ್ಚ್ ತಿಂಗಳ ಮೊದಲ ವಾರದಲ್ಲಿ ಬಜೆಟ್ ಅಧಿವೇಶನ ನಡೆಸಲು ಚಿಂತನೆ ನಡೆಸಲಾಗುತ್ತಿದೆ. ಬಜೆಟ್ ಅಧಿವೇಶನದ ದಿನಾಂಕ ಅಂತಿಮಗೊಳಿಸಿಲ್ಲ. ಜಂಟಿ ಅಧಿವೇಶನದಲ್ಲಿ ಮುಂದಿನ ಬಜೆಟ್ ಬಗ್ಗೆ ಮತ್ತು ಯೋಜನೆಗಳ ಬಗ್ಗೆ ಚರ್ಚೆ ನಡೆಯಲಿದೆ ಎಂದರು.